ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಎರಡನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 28ನೇ ನವೆಂಬರ್, 2013

(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಸದಸ್ಯರಿಗೆ ಈಗಾಗಲೇ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಪಟ್ಟಿಯ ರೀತ್ಯಾ)

3. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ) ಅವರು 2013ನೇ ಸಾಲಿನ ಸಮಿತಿಯ ಮೊದಲನೇ ವರದಿಯನ್ನು ಒಪ್ಪಿಸುವುದು.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ ಶೆಟ್ಟರ, ಆರ್. ಅಶೋಕ್, ಕೆ.ಜಿ.ಬೋಪಯ್ಯ, ಬಸವರಾಜ ಬೊಮ್ಮಾಯಿ, ಎಸ್. ಸುರೇಶ್ ಕುಮಾರ್ ಹಾಗೂ ಇತರರು ರಾಜ್ಯದಲ್ಲಿ ಸರ್ಕಾರವು ನೂತನವಾಗಿ ಜಾರಿಗೆ ತಂದಿರುವ "ಶಾದಿಭಾಗ್ಯ" ಯೋಜನೆಯನ್ನು ರಾಜ್ಯದ ಎಲ್ಲಾ ಹಿಂದುಳಿದ ಬಡ ವರ್ಗದ ಹೆಣ್ಣುಮಕ್ಕಳಿಗೂ ವಿಸ್ತರಿಸುವುದರ ಬಗ್ಗೆ ಮುಂದುವರೆದ ಚರ್ಚೆ.

ಪು.ತಿ.ನೋ.,

2. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಕೆ. ಕುಮಾರಸ್ವಾಮಿ ಹೆಚ್.ಡಿ.ರೇವಣ್ಣ, ಹೆಚ್.ಸಿ. ಬಾಲಕೃಷ್ಣ, ಕೆ.ಎಂ.ಶಿವಲಿಂಗೇಗೌಡ ಹಾಗೂ ಇತರರು ಉತ್ತರ ಕರ್ನಾಟಕದ 9 ಜಿಲ್ಲೆಗಳಿಗೆ ಕಳಸಾ-ಬಂಡೂರಿ ನಾಲಾ ಯೋಜನೆಯನ್ನು ಅನುಷ್ಠಾನಗೊಳಿಸಲು ವಿಳಂಬ ನೀತಿಯನ್ನು ಅನುಸರಿಸುತ್ತಿರುವ ಬಗ್ಗೆ

ಮತ್ತು

ಶ್ರೀಯುತರುಗಳಾದ ಜಗದೀಶ ಶೆಟ್ಟರ, ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸವದಿ, ಕೆ.ಜಿ.ಬೋಪಯ್ಯ, ಮತ್ತು ಅರವಿಂದ ಲಿಂಬಾವಳಿ ಹಾಗೂ ಇತರರು ಕಳಸಾ-ಬಂಡೂರಿ ನಾಲಾ ಕಾಮಗಾರಿ ಯೋಜನೆಯು 2006-07 ರಲ್ಲಿ ಪ್ರಾರಂಭಿಸಲಾಗಿದ್ದರೂ ಇದೂವರೆಗೂ ಪೂರ್ಣಗೊಳ್ಳದೇ ನಿಧಾನಗತಿಯಲ್ಲಿ ಸಾಗುತ್ತಿರುವ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹೆಚ್.ಡಿ.ರೇವಣ್ಣ, ಕೆ.ಗೋಪಾಲಯ್ಯ ಹಾಗೂ ಇತರರು ಬೆಂಗಳೂರು ಉತ್ತರ ತಾಲ್ಲೂಕು ಕಸಬಾ ಹೋಬಳಿ ನಾಗಶೆಟ್ಟಿಹಳ್ಳಿ ಹಾಗೂ ಭೂಪಸಂದ್ರ ಗ್ರಾಮದ ಕರ್ನಾಟಕ ಹಾಲು ಮಹಾಮಂಡಳಿಗೆ ಸೇರಿದ ಆಸ್ತಿಯನ್ನೂ ಭೂ ಮಾಫಿಯಾದೊಂದಿಗೆ ಶಾಮೀಲಾಗಿ ಸುಳ್ಳು ದಾಖಲೆಯನ್ನು ಸೃಷ್ಟಿಸಿ ಸರ್ಕಾರವನ್ನು ವಂಚಿಸುತ್ತಿರುವ ಬಗ್ಗೆ ಚರ್ಚೆ.

4. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹೆಚ್.ಡಿ.ರೇವಣ್ಣ, ಕೆ.ಗೋಪಾಲಯ್ಯ ಹಾಗೂ ಇತರರು ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಹುಹಳ್ಳಿಗಳ ಕುಡಿಯುವ ನೀರು ಯೋಜನೆಗೆ ಹಣ ಬಿಡುಗಡೆಯಾಗಿದ್ದರೂ ಆ ಹಣ ಬಳಸಿಕೊಳ್ಳದೇ ಇರುವುದರಿಂದ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿರುವ ವಿಷಯದ ಬಗ್ಗೆ ಚರ್ಚೆ.

5. ಶಾಸನ ರಚನೆ

I ವಿಧೇಯಕಗಳನ್ನು ಮಂಡಿಸುವುದು

1) **ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ, 2013**
ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಪು.ತಿ.ನೋ.,

2) **ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2013**
ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3) **ಕರ್ನಾಟಕ ರಾಜ್ಯ ಮಹಿಳಾ ಆಯೋಗ (ತಿದ್ದುಪಡಿ) ವಿಧೇಯಕ, 2013**
ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ರಾಜ್ಯ ಮಹಿಳಾ ಆಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4) **ಕರ್ನಾಟಕ ಕೊಳಚೆ ಪ್ರದೇಶಗಳ (ಮೇಲ್ಪಾಟು ಮತ್ತು ನಿರ್ಮೂಲನ) (ತಿದ್ದುಪಡಿ) ವಿಧೇಯಕ, 2013**
ಡಾ॥ ಎಂ.ಹೆಚ್. ಅಂಬರೀಷ್ (ವಸತಿ ಸಚಿವರು) ಅವರು

ಅ) 2013ನೇ ಸಾಲಿನ ಕರ್ನಾಟಕ ಕೊಳಚೆ ಪ್ರದೇಶಗಳ (ಮೇಲ್ಪಾಟು ಮತ್ತು ನಿರ್ಮೂಲನ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

5) **ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ)(ತಿದ್ದುಪಡಿ) ವಿಧೇಯಕ, 2013**
ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಯವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ)(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

6) **ಕರ್ನಾಟಕ ನಾಗರೀಕ ಸೇವೆಗಳ (ಜಲ ಸಂಪನ್ಮೂಲ ಸೇವೆ)(ಸಹಾಯಕ ಇಂಜಿನಿಯರುಗಳ ಮತ್ತು ಕಿರಿಯ ಇಂಜಿನಿಯರುಗಳ ವಿಶೇಷ ನೇಮಕಾತಿ) ವಿಧೇಯಕ, 2013**
ಶ್ರೀ ಎಂ.ಬಿ. ಪಾಟೀಲ್ (ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರು) ಅವರು

ಅ) 2013ನೇ ಸಾಲಿನ ಕರ್ನಾಟಕ ನಾಗರೀಕ ಸೇವೆಗಳ (ಜಲ ಸಂಪನ್ಮೂಲ ಸೇವೆ)(ಸಹಾಯಕ ಇಂಜಿನಿಯರುಗಳ ಮತ್ತು ಕಿರಿಯ ಇಂಜಿನಿಯರುಗಳ ವಿಶೇಷ ನೇಮಕಾತಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಪು.ತಿ.ನೋ.,

6. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಡಿ. ರೇವಣ್ಣ ಅವರು ಹೊಳೆನರಸೀಪುರ ತಾಲ್ಲೂಕಿನ ದುದ್ದ, ಪಡುವಲಹಿಪ್ಪೆ ಮತ್ತು ಹರದನಹಳ್ಳಿಗಳ ಸಮುದಾಯ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದ ರೋಗಿಗಳಿಗೆ ತೊಂದರೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2. ಶ್ರೀ ಕೆ.ಜಿ.ಬೋಪಯ್ಯ ಅವರು ಕೊಡಗು ಜಿಲ್ಲೆ ಮಡಿಕೇರಿ ತಾಲ್ಲೂಕಿನ ಸಂಪಾಜೆ, ಚೆಂಬು, ಪೆರಾಜೆ ಮತ್ತು ಕರಿಕೆ ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿ ಅಡಿಕೆ ಬೆಳೆಗೆ ಕೊಳೆ ರೋಗ ಉಂಟಾಗಿ ಬೆಳೆಯು ನಾಶವಾಗಿರುವುದರಿಂದ ರೈತರು ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಗಮನ ಸೆಳೆಯುವುದು.

3. ಶ್ರೀ ಎಂ.ಟಿ. ಕೃಷ್ಣಪ್ಪ ಅವರು 2012-13ನೇ ಸಾಲಿನ ಸುವರ್ಣ ಗ್ರಾಮ ಮತ್ತು ಸಿ.ಎಂ.ಜಿ.ಎಸ್‌ವೈ ಯೋಜನೆಗಳನ್ನು ಮುಂದುವರಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

4. ಶ್ರೀಯುತರಾದ ಬಸವರಾಜ ರಾಯರೆಡ್ಡಿ ಮತ್ತು ಅಪ್ಪಾಜಿ ನಾಡಗೌಡ ಅವರುಗಳು ಕೊಪ್ಪಳ ಜಿಲ್ಲೆಯ ಯಲಬುರ್ಗಾ, ಕುಷ್ಟಗಿ ಹಾಗೂ ಕೊಪ್ಪಳ ತಾಲ್ಲೂಕುಗಳು ಮತ್ತು ಬಿಜಾಪುರ ಜಿಲ್ಲೆಯ ಮುದ್ದೇಬಿಹಾಳ ಮತ್ತು ಇಂಡಿ ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5. ಡಾ|| ಎ.ಬಿ. ಮಾಲಕರೆಡ್ಡಿ ಅವರು ಭಾರತದ ಸಂವಿಧಾನದ ಅನುಚ್ಛೇದ 371 ಜೆ ತಿದ್ದುಪಡಿ ಅನ್ವಯ ಹೈದ್ರಾಬಾದ-ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿನ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6. ಶ್ರೀ ಗುರು ಪಾಟೀಲ ಶಿರವಾಳ ಅವರು ಕೃಷ್ಣಾ ಮೇಲ್ದಂಡೆ ಯೋಜನೆಯ ಆಲಮಟ್ಟಿ ಹಾಗೂ ನಾರಾಯಣಪುರ ಅಣೆಕಟ್ಟಿನಿಂದ ಅಚ್ಚುಕಟ್ಟು ಪ್ರದೇಶದ ರೈತರ ಜಮೀನಿಗೆ ಮಾರ್ಚ್ ಅಂತ್ಯದವರೆಗೆ ನೀರು ಹರಿಸುವ ಬಗ್ಗೆ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

7. ಶ್ರೀಯುತರಾದ ಕೆ.ಎಸ್. ಮಂಜುನಾಥ, ಎಂ.ಕೃಷ್ಣಾರೆಡ್ಡಿ, ಕೆ.ಆರ್. ರಮೇಶಕುಮಾರ ಮತ್ತು ಪಿಳ್ಳ ಮುನಿಶಾಮಪ್ಪ ಅವರುಗಳು ಕರ್ನಾಟಕ ರಾಜ್ಯ ಅಕ್ಷರ ದಾಸೋಹದ ಸಿಬ್ಬಂದಿಯವರಿಗೆ ಕನಿಷ್ಠ ವೇತನ, ಬಿಸಿಯೂಟ ಸೌಲಭ್ಯ ಮತ್ತು ಅವರುಗಳನ್ನು ಶಾಲಾ ಸಿಬ್ಬಂದಿಗಳೆಂದು ಪರಿಗಣಿಸುವುದರ ಜೊತೆಗೆ ಅವರಿಗೆ ವರ್ಗಾವಣೆ ಸೌಲಭ್ಯವನ್ನು ಕಲ್ಪಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

8. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ಎಂ.ಜಿ.ಎಂ. ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ಇರುವುದರಿಂದ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

9. ಶ್ರೀಯುತರಾದ ಹೆಚ್.ಡಿ.ರೇವಣ್ಣ, ಕೆ.ಎಂ.ಶಿವಲಿಂಗೇಗೌಡ ಮತ್ತು ಸಿ.ಎನ್. ಬಾಲಕೃಷ್ಣ ಅವರುಗಳು ಹಾಸನ ನಗರದಲ್ಲಿ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಕಟ್ಟಡದ ಎರಡನೇ ಹಂತದ ಕಾಮಗಾರಿಗಳಿಗೆ ಅವಶ್ಯಕ ಅನುದಾನ ಬಿಡುಗಡೆ ಮಾಡದಿರುವುದರಿಂದ ಕಾಮಗಾರಿಗಳು ಕುಂಠಿತಗೊಂಡಿರುವ ಬಗ್ಗೆ ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

10. ಶ್ರೀಯುತರಾದ ಸಿ.ಎನ್. ಬಾಲಕೃಷ್ಣ ಹೆಚ್.ಡಿ.ರೇವಣ್ಣ, ಕೆ.ಎಂ.ಶಿವಲಿಂಗೇಗೌಡ ಅವರುಗಳು ಹಾಸನ ಜಿಲ್ಲೆಯಲ್ಲಿ 2012-13ನೇ ಸಾಲಿನ ಪರಿಶಿಷ್ಟ ಜಾತಿ ಉಪ ಯೋಜನೆ ಕ್ರೋಢೀಕೃತ ಅನುದಾನದಲ್ಲಿ ಪರಿಶಿಷ್ಟ ಜಾತಿಯವರ ಕಾಲೋನಿಗಳಿಗೆ ಸಿ.ಸಿ ರಸ್ತೆ ಮತ್ತು ಒಳಚರಂಡಿಗಳ ಅಭಿವೃದ್ಧಿ ಕಾಮಗಾರಿಗಳಿಗೆ ಅವಶ್ಯಕ ಅನುದಾನವನ್ನು ಬಿಡುಗಡೆ ಮಾಡದಿರುವ ಬಗ್ಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

11. ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು ರಾಜ್ಯದಲ್ಲಿ ಸರ್ವೆ ಕಾರ್ಯವನ್ನು ಕೈಗೊಳ್ಳಲು ರೂ 300 ರಿಂದ 1200ಗಳ ವರೆಗೆ ವಸೂಲಿ ಮಾಡುತ್ತಿರುವುದರಿಂದ ರೈತರಿಗುಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12. ಶ್ರೀ ಡಿ. ನಾಗರಾಜಯ್ಯ ಅವರು ತುಮಕೂರು ಜಿಲ್ಲೆ ಕುಣಿಗಲ್ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಮದ್ದೂರು ರಸ್ತೆಯನ್ನು ಕೇಶಿಪ್ ವತಿಯಿಂದ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

13. ಶ್ರೀ ಪಿ ರಾಜೀವ್ ಅವರು ಕರ್ನಾಟಕ ವಿದ್ಯುತ್ ನಿಗಮ (ವಿಜಿಲೆನ್ಸ್) ದವರು ರೈತರು ಅಕ್ರಮವಾಗಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಪಡೆದಿರುವರೆಂದು ಸುಳ್ಳು ಆರೋಪ ಹೊರಿಸಿ ಮೊಕದ್ದಮೆಗಳನ್ನು ದಾಖಲಿಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

14. ಶ್ರೀ ಸಂಜಯ ಪಾಟೀಲ್ ಅವರು ರಾಜ್ಯದಲ್ಲಿ ಅಲ್ಪಸಂಖ್ಯಾತರ ಪೈಕಿ ಮುಸ್ಲಿಂ ವರ್ಗದ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ವಿದ್ಯಾರ್ಥಿವೇತನವನ್ನು ಪಾವತಿಸುತ್ತಿರುವಂತೆ ಕ್ರಿಶ್ಚಿಯನ್ ಮತ್ತು ಜೈನ್ ಧರ್ಮದ ವಿದ್ಯಾರ್ಥಿಗಳಿಗೂ ಆನ್‌ಲೈನ್ ಮೂಲಕ ವಿದ್ಯಾರ್ಥಿ ವೇತನವನ್ನು ನೀಡುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

7. ಅರ್ಧ ಗಂಟೆ ಕಾಲಾವಧಿ ಚರ್ಚೆ

1. ಶ್ರೀ ಜಗದೀಶ ಶೆಟ್ಟರ ಅವರು "ಅತಿವೃಷ್ಠಿಯಿಂದಾಗಿರುವ ಹಾನಿ" ಬಗ್ಗೆ ದಿನಾಂಕ: 25.11.2013 ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಮೊದಲನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 07(156)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

8. ಖಾಸಗಿ ಸದಸ್ಯರ ಕಾರ್ಯಕಲಾಪಗಳು

1. *ಶ್ರೀ ಕೆ.ಗೋಪಾಲಯ್ಯ , ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.*

''ಬೆಂಗಳೂರು ಪಶ್ಚಿಮ ಭಾಗದ ಭಿಕ್ಷುಕರ ಪುನರ್ವಸತಿ ಕೇಂದ್ರದ ಬಳಿ ದೆಹಲಿಯ ಪ್ರತಿಷ್ಠಿತ ಸುಸಜ್ಜಿತ ಆಸ್ಪತ್ರೆಯಾದ ಏಮ್ಸ್‌ನ ಶಾಖೆಯನ್ನು ಬೆಂಗಳೂರಿನಲ್ಲಿ ಸ್ಥಾಪಿಸಲು'' ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಈ ಸದನವು ನಿರ್ಣಯಿಸುತ್ತದೆ.''

2. *ಶ್ರೀ ಎಸ್.ಆರ್. ವಿಶ್ವನಾಥ್ ಮತ್ತು ಡಾ|| ಕೆ. ಶ್ರೀನಿವಾಸ ಮೂರ್ತಿ ಅವರುಗಳು ಕೆಳಕಂಡ ನಿರ್ಣಯವನ್ನು ಮಂಡಿಸುವುದು.*

''ನಿಗಮಿತ ಸಾಮಾಜಿಕ ಹೊಣೆಗಾರಿಕೆ ಚಟುವಟಿಕೆಗಳ (CSR activities) ಪೈಕಿ ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಸಂಬಂಧಪಟ್ಟ ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿ ಚಟುವಟಿಕೆಗಳ ಸಲುವಾಗಿ ಸಾರ್ವಜನಿಕ ಉದ್ದಿಮೆಗಳು/ಕಂಪನಿಗಳು/ರಾಜ್ಯ ಸರ್ಕಾರಿ ಸ್ವಾಮ್ಯದ ಉದ್ದಿಮೆಗಳು/ಖಾಸಗಿ ಕಂಪನಿಗಳು ಪ್ರತಿ ವರ್ಷ ತಮ್ಮ ಲಾಭದ ಅಂಶದಲ್ಲಿ ಒಂದು ಪಾಲಿನ ಕೊಡುಗೆ''ಯನ್ನು ನೀಡುವ ಕುರಿತು ಈ ಸದನವು ನಿರ್ಣಯಿಸುತ್ತದೆ.''

3. *ಶ್ರೀ ಪಿ.ಎಂ. ನರೇಂದ್ರಸ್ವಾಮಿ ಹಾಗೂ ಇತರರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.*

''ಇಡೀ ರಾಜ್ಯದಲ್ಲಿ ಮದ್ಯವನ್ನು ಮಾರುವುದಕ್ಕಾಗಿ ಅಬಕಾರಿ ಇಲಾಖೆಯು ಸಿ.ಎಲ್-2 ಪರವಾನಗಿಯನ್ನು ಕೊಡುತ್ತಿದ್ದು 1991 ರಿಂದ ಮೀಸಲಾತಿ ನಿಯಮವನ್ನು ಪಾಲಿಸಿಲ್ಲದಿರುವುದರ ಜೊತೆಗೆ 2011ರ ಜನಗಣತಿ ಪ್ರಕಾರ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಜನಸಂಖ್ಯೆಯು ಕೂಡ ಹೆಚ್ಚಾಗಿರುವುದರಿಂದ ಹೆಚ್ಚಾದ ಜನಸಂಖ್ಯೆಗನುಗುಣವಾಗಿ ಮೀಸಲಾತಿ ನಿಯಮಗಳನ್ನು ಪಾಲನೆ ಮಾಡಿ 1500 ಪರವಾನಗಿಗಳನ್ನು ಈ ವರ್ಗದ ಜನಾಂಗದವರಿಗೆ ಮಂಜೂರು ಮಾಡುವ'' ಕುರಿತು ಈ ಸದನವು ನಿರ್ಣಯಿಸುತ್ತದೆ.''

ಪು.ತಿ.ನೋ.,

4. ***ಶ್ರೀ ಪಿ.ಎಂ. ನರೇಂದ್ರ ಸ್ವಾಮಿ ಹಾಗೂ ಇತರರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.***

"ಸರ್ಕಾರವು ಹೊರಗುತ್ತಿಗೆ, ಅರೆಸರ್ಕಾರಿ ಹಾಗೂ ಅತಿಥಿ ಹುದ್ದೆಗಳು ಎನ್ನುವ ವಿವಿಧ ಹೆಸರಿನಡಿಯಲ್ಲಿ ಹಲವಾರು ಹುದ್ದೆಗಳನ್ನು ಭರ್ತಿಮಾಡಿಕೊಳ್ಳುತ್ತಿದ್ದು ಇದು ಸಂವಿಧಾನ ಬಾಹಿರವಾಗಿರುತ್ತದೆ. 45 ದಿವಸಗಳಿಗಿಂತಲೂ ಹೆಚ್ಚಿನ ಅವಧಿಗೆ ತುಂಬಿಕೊಳ್ಳುವ ಯಾವುದೇ ರೀತಿಯ ನೇಮಕಾತಿಯಲ್ಲಿಯೂ ಮೀಸಲಾತಿ ನಿಯಮವನ್ನು ಸಂವಿಧಾನದ ಪ್ರಕಾರ ಪಾಲಿಸಬೇಕಾಗುತ್ತದೆ. ಆದುದರಿಂದ ಸರ್ಕಾರವು ಹೊರಗುತ್ತಿಗೆ ಅರೆಸರ್ಕಾರಿ ಹಾಗೂ ಅತಿಥಿ ಹುದ್ದೆಗಳು ಎಂದು ಏನು ಸರ್ಕಾರ ಹಲವಾರು ರೀತಿಯ ಹುದ್ದೆಗಳನ್ನು ಚಾಚೂ ತಪ್ಪದೆ ಪಾಲಿಸಿ ಅನುಸೂಚಿತ ಮತ್ತು ಅನುಸೂಚಿತ ಪಂಗಡದ ಜನಾಂಗದವರಿಗೆ ನ್ಯಾಯ ಒದಗಿಸಿಕೊಡಬೇಕೆಂದು ಒತ್ತಾಯಪೂರ್ವಕವಾಗಿ ಈ ಸದನವು ನಿರ್ಣಯಿಸುತ್ತದೆ."

5. ***ಶ್ರೀ ಪಿ.ಎಂ. ನರೇಂದ್ರ ಸ್ವಾಮಿ ಹಾಗೂ ಇತರರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.***

"ಗಣಿಗಾರಿಕೆಗೆ ಸಂಬಂಧಪಟ್ಟಂತೆ ಅಲಾಟ್‌ಮೆಂಟ್ Minor and Major Mining activities ಸಂಬಂಧಪಟ್ಟಂತೆ ಇಲಾಖೆಯವರು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡದವರಿಗೆ ಮೀಸಲಾತಿ ನಿಯಮದಂತೆ ಯಾವ ಅವಕಾಶವನ್ನು ಕಲ್ಪಿಸಿಕೊಡಬೇಕಾಗಿತ್ತೋ ಆ ಅವಕಾಶವನ್ನು ಕಲ್ಪಿಸಿಲ್ಲದಿರುವುದರಿಂದ ಈ ವರ್ಗದ ಜನರು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮತ್ತು ಆರ್ಥಿಕವಾಗಿ ಮುಂದೆ ಬರಲು ಸಂವಿಧಾನದಲ್ಲಿ ಯಾವ ರೀತಿಯ ಅವಕಾಶವನ್ನು ಈ ವರ್ಗದ ಜನರಿಗೆ ಕಲ್ಪಿಸಿಕೊಡಬೇಕೆಂದು ಹೇಳಲಾಗಿದೆಯೋ ಅದನ್ನು ಚಾಚೂತಪ್ಪದೇ ಪಾಲಿಸುವ ಕುರಿತು ಈ ಸದನವು ನಿರ್ಣಯಿಸುತ್ತದೆ."

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N.

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)